ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/98 /2022–23

ಕಾರ್ಯಪಾಲಕ ಅಭಿಯಂತರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: 18/08/2022

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:– "Construction of Synthetic tennis court, street vending zone & other developmental works at judicial layout main and cross roads, Chikkabommasandra, Someshwara Nagar, Allalasandra village and surrounding areas in ward No 04 of Yelahanka Division under Amruth Nagarothan Grants. (PACKAGE No-06)"

ಉಲ್ಲೇಖ:– 1) ಸರ್ಕಾರದ ಆದೇಶ ಸಂಖ್ಯೆ: ನಆಇ 154 ಎಂ.ಎನ್.ವೈ 2022(ಇ) ಬೆಂಗಳೂರು ದಿನಾಂಕ: 08–04–2022.

2) ಸರ್ಕಾರದ ಆದೇಶ ಸಂಖ್ಯೆ:ನಅಇ 381 ಎಂಎನ್‌ವೈ 2022(ಇ), ಬೆಂಗಳೂರು, ದಿನಾಂಕ:17–08–2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ ಉಪವಿಭಾಗ) ರವರು 2022–23ನೇ ಸಾಲಿನ ಅಮೃತ್ ನಗರೋತ್ಥಾನ ಯೋಜನೆಯಡಿಯಲ್ಲಿ ಘೋಷಿಸಿರುವಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಯಲಹಂಕ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆದೇಶ ಪತ್ರದ ಸಂಖ್ಯೆ: ನ.ಆ.ಇ 154 ಎಂ.ಎನ್.ವೈ 2022(ಇ)ಬೆಂಗಳೂರು ದಿನಾಂಕ: 08–04–2022 ರಲ್ಲಿ GO SI No. A-12, A-14, A-15, B-29, B-32, B-33, B-35, B-37, B-38, B-39 &, B-40 ರಡಿ ಮಂಜೂರಾಗಿರುವ ಕಾಮಗಾರಿಗಳಿಗೆ 2021–22ನೇ ಸಾಲಿನ ಲೋಕೋಪಯೋಗಿ ಇಲಾಖೆ ದರಪಟ್ಟಿಗಳನ್ವಯ ಹಾಗೂ ಅನುಮೋದಿತ ದರಪಟ್ಟಿಯಂತೆ **ರೂ.2000.00** ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಲಾಗಿದೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(2)ರಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2021–22 ದಿನಾಂಕ:18–01–2022 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 10 ಕ್ರ.ಸಂ 98 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
7. ಸದರಿ ಕೆಲಸವು ಎಂಬ್ಯಾಕ್‌ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು–64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

ಪ್ರತಿಯನ್ನು:

Scanned with CamScanner